# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 46 |
| ಸದಸ್ಯರ ಹೆಸರು | : | ಶ್ರೀ ಕೇಶವ ಪ್ರಸಾದ್ ಎಸ್.<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 04.03.2025 |
| ಉತ್ತರಿಸುವ ಸಚಿವರು | : | ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು. |

<table>
<tr><th>ಕ್ರ.<br>ಸಂ.</th><th>ಪ್ರಶ್ನೆಗಳು</th><th>ಉತ್ತರ</th></tr>
<tr><td>ಅ)</td><td>ಪ್ರಸ್ತುತ ಸರ್ಕಾರ ಅಸ್ತಿತ್ವಕ್ಕೆ ಬಂದ ಮೇಲೆ ಸಣ್ಣ ಕೈಗಾರಿಕೆಯಲ್ಲಿ ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ; ಈ ಯೋಜನೆಗಳಲ್ಲಿ ಬಡತನ ರೇಖೆಗಿಂತ ಕೆಳಗಿನವರಿಗಾಗಿ ಯಾವ ಯಾವ ಯೋಜನೆಯನ್ನು ಕೈಗೊಳ್ಳಲಾಗಿದೆ;</td><td>
ಪ್ರಸ್ತುತ ಸರ್ಕಾರದ ಅಸ್ತಿತ್ವಕ್ಕೆ ಬಂದ ಮೇಲೆ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮದಿಂದ ಈ ಕೆಳಕಂಡ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ:<br><br>
ಅ) 2023-24ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-262 ರಲ್ಲಿ ಸಣ್ಣ ಕೈಗಾರಿಕೆಗಳನ್ನು ಪ್ರೋತ್ಸಾಹಿಸಲು ಈ ಕೆಳಕಂಡ 7 ಸ್ಥಳಗಳಲ್ಲಿ ಹೊಸದಾಗಿ ಕೈಗಾರಿಕಾ ವಸಾಹತುಗಳನ್ನು ಹಂತ ಹಂತವಾಗಿ ಸ್ಥಾಪಿಸಲಾಗುವುದು ಎಂದು ಘೋಷಿಸಲಾಗಿರುತ್ತದೆ. ಅದರಂತೆ, ಈ ಕೆಳಕಂಡ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ:<br><br>
<table>
<tr><th>ಕ್ರ.<br>ಸಂ.</th><th>ಕೈಗಾರಿಕಾ ವಸಾಹತು</th></tr>
<tr><td>1</td><td>ಕೋಡ್ಕಣಿ-ಸಿರಸಿ-ಸಿದ್ದಾಪುರ, ಉತ್ತರ ಕನ್ನಡ ಜಿಲ್ಲೆ</td></tr>
<tr><td>2</td><td>ಕಲ್ಲಂಬಳ್ಳಿ ಗ್ರಾಮ, ಬದನಗುಪ್ಪೆ, ಚಾಮರಾಜನಗರ ಜಿಲ್ಲೆ.</td></tr>
<tr><td>3</td><td>ಕಣಗಲಾ, ಬೆಳಗಾವಿ ಜಿಲ್ಲೆ</td></tr>
<tr><td>4</td><td>ಇಂಡಿ, ವಿಜಯಪುರ ಜಿಲ್ಲೆ</td></tr>
<tr><td>5</td><td>ಚಿತ್ತಾಪುರ 2ನೇ ಹಂತ, ಕಲಬುರಗಿ ಜಿಲ್ಲೆ</td></tr>
<tr><td>6</td><td>ಹುಬ್ಬಳ್ಳಿ</td></tr>
<tr><td>7</td><td>ಯಾದಗಿರಿ, ಶಹಾಪುರ</td></tr>
</table><br>
ಆ) 2024-25ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-320 ರಲ್ಲಿ "ವಿವಿಧ ಜಿಲ್ಲೆಗಳಲ್ಲಿ ಅಸ್ತಿತ್ವದಲ್ಲಿರುವ ಕೈಗಾರಿಕಾ ವಸಾಹತುಗಳನ್ನು ಕೇಂದ್ರ ಸರ್ಕಾರದ ಸಹಯೋಗದಲ್ಲಿ 39 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಕರ್ನಾಟಕ ರಾಜ್ಯ ಸಣ್ಣ ಪ್ರಮಾಣದ ಕೈಗಾರಿಕೆಗಳ ನಿಗಮದ (KSSIDC) ಮೂಲಕ ಮೇಲ್ದರ್ಜೆಗೇರಿಸಲಾಗುವುದು" ಎಂದು ಘೋಷಿಸಲಾಗಿರುತ್ತದೆ.<br><br>
ಅದರಂತೆ, ಮೇಲ್ಕಂಡ ಯೋಜನೆಗಳನ್ನು ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದಿಂದ ಜಾರಿಗೊಳಿಸಲು ಅನುಮೋದನೆ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br><br>
ಮುಂದುವರೆದು, ಕೈಗಾರಿಕಾ ಸಮಗ್ರ ಅಭಿವೃದ್ಧಿಗಾಗಿ ಹೊಸ ಕೈಗಾರಿಕಾ ನೀತಿ 2025-30 ನ್ನು ಜಾರಿಗೊಳಿಸಲಾಗಿದೆ. ಇದರಲ್ಲಿ ಹೆಚ್ಚಿನ ಪ್ರೋತ್ಸಾಹ ಮತ್ತು ರಿಯಾಯಿತಿಗಳನ್ನು ವಲಯವಾರು ಅರ್ಹ ಘಟಕಗಳಿಗೆ ಒದಗಿಸಲು ಕಲ್ಪಿಸಲಾಗಿದೆ. ಈ ಸೌಲಭ್ಯಗಳು ಎಲ್ಲಾ ವರ್ಗದವರಿಗೂ ಅನ್ವಯಿಸುತ್ತದೆ.
</td></tr>
</table>

| | | |
|---|---|---|
| ಆ) | ರಾಜ್ಯದಲ್ಲಿ ಕೈಗಾರಿಕೆ ನಿವೇಶನ ಮಂಜೂರಾದ ಎಷ್ಟು ಫಲಾನುಭವಿಗಳು ಹಣ ತುಂಬಿರುವುದಿಲ್ಲ; ಹಣ ತುಂಬದೆ ಇರುವವರ ಹಂಚಿಕೆಯನ್ನು ರದ್ದುಪಡಿಸಿ ನಿಯಮಾನುಸಾರ ಬೇರೆಯವರಿಗೆ ಹಂಚಿಕೆ ಮಾಡಲಾಗಿದೆಯೆ; | ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ನಿಯಮಿತ ವತಿಯಿಂದ ಮಂಜೂರಾದ ಒಟ್ಟು 128 ನಿವೇಶನಗಳ ಹಂಚಿಕೆದಾರರು ಹಣ ತುಂಬಿರುವುದಿಲ್ಲ. ಹಣ ತುಂಬದೆ ಇರುವ ಫಲಾನುಭವಿಗಳ ಹಂಚಿಕೆಯನ್ನು ರದ್ದುಪಡಿಸಿ ನಿಯಮಾನುಸಾರ ಬೇರೆ ಅರ್ಹ ಫಲಾನುಭವಿಗಳಿಗೆ ಹಂಚಿಕೆ ಮಾಡಲು ಕ್ರಮ ಕೈಗೊಳ್ಳಲಾಗಿರುತ್ತದೆ. |
| ಇ) | ವಿಜಯಪುರ ಜಿಲ್ಲೆಯಲ್ಲಿ ಎಷ್ಟು ಹೊಸ ಯೋಜನೆಗಳು ಜಾರಿಗೆ ಬಂದಿವೆ; ನಿರುದ್ಯೋಗಿ ಪಧವೀದರರುಗಳು ಸ್ವಂತ ಉದ್ದಿಮೆ ಹೊಂದಲು ಮುಂದೆ ಬರುವವರನ್ನು ಉತ್ತೇಜಿಸಲು ಯಾವ ಯಾವ ಹೊಸ ಯೋಜನೆ ಹಾಕಿಕೊಳ್ಳಲು ಸರ್ಕಾರ ನಿರ್ಧರಿಸಿದೆ; | 2023-24ನೇ ಸಾಲಿನ ಆಯವ್ಯಯ ಘೋಷಣೆಯಂತೆ ವಿಜಯಪುರ ಜಿಲ್ಲೆಯ ಇಂಡಿ ತಾಲ್ಲೂಕಿನ ಬಳ್ಳೊಳ್ಳಿ ಹೋಬಳಿಯ ಬೂದಿಹಾಳ ಗ್ರಾಮದಲ್ಲಿ 19.38 ಎಕರೆ ಜಮೀನಿನಲ್ಲಿ ಹೊಸದಾಗಿ ಕೈಗಾರಿಕಾ ವಸಾಹತುವನ್ನು ಸ್ಥಾಪಿಸಲು ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ನಿಯಮಿತದಿಂದ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗಿರುತ್ತದೆ.<br><br>ವಿಜಯಪುರ ಜಿಲ್ಲೆಯಲ್ಲಿ ಕಳೆದ 03 ವರ್ಷಗಳಲ್ಲಿ ಕೈಗಾರಿಕಾ ನೀತಿ 2014-19 ಮತ್ತು 2020-25 ರಡಿ ಒಟ್ಟು 85 ಘಟಕಗಳಿಗೆ ಬಂಡವಾಳ ಹೂಡಿಕೆ ಸಹಾಯಧನ ಮಂಜೂರು ಮಾಡಲಾಗಿದೆ. ನಿರುದ್ಯೋಗಿ ಪಧವೀದರರುಗಳು ಸ್ವಂತ ಉದ್ದಿಮೆ ಹೊಂದಲು ಮುಂದೆ ಬರುವವರನ್ನು ಉತ್ತೇಜಿಸಲು ಸರ್ಕಾರವು ಕೈಗಾರಿಕಾ ನೀತಿ 2025-30ನ್ನು ಜಾರಿಗೊಳಿಸಿರುತ್ತದೆ.<br><br>ಭಾರತ ಸರ್ಕಾರದ ಪ್ರಧಾನಮಂತ್ರಿ ಉದ್ಯೋಗ ಸೃಜನಾ ಯೋಜನೆಯಡಿ ಸ್ವಯಂ-ಉದ್ಯೋಗ ಕಂಡುಕೊಳ್ಳಲು ಯುವಜನತೆಗೆ ಕೈಗಾರಿಕಾ ಘಟಕ ಸ್ಥಾಪಿಸಲು ಗರಿಷ್ಟ ರೂ.50 ಲಕ್ಷದವರೆಗೆ ಮತ್ತು ಸೇವಾ ಘಟಕ ಸ್ಥಾಪಿಸಲು ಯೋಜನಾ ವೆಚ್ಚ ಗರಿಷ್ಟ ರೂ.20 ಲಕ್ಷದವರೆಗಿನ ಪ್ರಸ್ತಾವನೆಗಳಿಗೆ ಹಣಕಾಸು ಸಂಸ್ಥೆಗಳ ಮೂಲಕ ಸಾಲ ಸೌಲಭ್ಯ ಒದಗಿಸಲಾಗುತ್ತದೆ ಹಾಗೂ ಗ್ರಾಮೀಣ ಪ್ರದೇಶದಲ್ಲಿ ಗರಿಷ್ಟ ಶೇ.35 ರವರೆಗೆ ಮತ್ತು ನಗರ ಪ್ರದೇಶಗಳಲ್ಲಿ ಗರಿಷ್ಟ ಶೇ.25 ರವರೆಗೆ ಸಹಾಯಧನ ನೀಡಲಾಗುತ್ತದೆ. |
| ಈ) | ಸಮೃದ್ಧಿ ಕರ್ನಾಟಕ ನಿರ್ಮಿಸಲು ಸಣ್ಣ ಕೈಗಾರಿಕೆ ಇಲಾಖೆಯ ಪಾತ್ರಗಳೇನು; | ರಾಜ್ಯದಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಇಲಾಖೆಯು ಹೊಸ ಕೈಗಾರಿಕಾ ನೀತಿ 2025-30 ಜಾರಿಗೆ ತಂದಿರುತ್ತದೆ. ಇದರಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಹೆಚ್ಚಿನ ಉತ್ತೇಜನ ಮತ್ತು ರಿಯಾಯಿತಿಗಳನ್ನು ಕಲ್ಪಿಸಲಾಗಿದೆ. |
| ಉ) | ವಿಜಯಪುರ ಜಿಲ್ಲೆಯಲ್ಲಿ ಎಷ್ಟು ಕೈಗಾರಿಕೆ ನಿವೇಶನಗಳು ಖಾಲಿ ಇವೆ? (ಸಂಪೂರ್ಣ ಮಾಹಿತಿ ಒದಗಿಸುವುದು) | ವಿಜಯಪುರ ಜಿಲ್ಲೆಯಲ್ಲಿ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ನಿಯಮಿತದ ನಾಲ್ಕು ಕೈಗಾರಿಕಾ ವಸಾಹತುಗಳಲ್ಲಿ ಯಾವುದೇ ಖಾಲಿ ನಿವೇಶನಗಳು ಇರುವುದಿಲ್ಲ. |

ಸಿಐ 35 ಸಿಎಸ್‌ಸಿ 2025

**(ಶರಣಬಸಪ್ಪ ದರ್ಶನಾಪೂರ)**
ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು.